## ಪ್ರಧಾನ ದಿವಾನಿ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ನಂಜನಗೂಡು, ಮೈಸೂರು ಜಿಲ್ಲೆ .

**ಸಿ.ಸಿ.ನಂ. 1085/2018**

| | | |
|---|---|---|
| ಸಾಕ್ಷಿದಾರರ ಹೆಸರು | : | ಶಿವರಾಜು |
| ತಂದೆಯ ಹೆಸರು | : | ಲಿಂಗಯ್ಯ |
| ವಯಸ್ಸು | : | 63 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸಸ್ಥಳ | : | ಈರೇಗೌಡನಹುಂಡಿ, ನಂಜನಗೂಡು ತಾ. |

**ಸಾಕ್ಷಿಯನ್ನು ದಿನಾಂಕಃ 02.02.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಮಾನ್ಯ ಸ. ಸ. ಅ. ರವರಿಂದಃ**

ಚಾಸಾ-1 ಮತ್ತು 2 ನನಗೆ ಪರಿಚಯವಿರುತ್ತಾರೆ. ಅದೇ ರೀತಿ ಆರೋಪಿಗಳು ಕೂಡ ಪರಿಚಯವಿರುತ್ತಾರೆ.

ಸುಮಾರು 3-4 ವರ್ಷಗಳ ಹಿಂದೆ ಬೆಳಿಗ್ಗೆ 11.00 ಗಂಟೆ ಸಮಯದಲ್ಲಿ 2 ಮತ್ತು 4 ನೇ ಆರೋಪಿಗಳು ಮೃತ ಚಾಸಾ-2 ರವರ ಜೊತೆ ಗಲಾಟೆ ಮಾಡುತ್ತಿರುವಾಗ ನಾನು ಹಸುಗಳನ್ನು ಜಮೀನಿಗೆ ಹೊಡೆದುಕೊಂಡು ಹೋಗಲು ನಿಂತಿದ್ದೆ, ಆದರೆ ಮುಂದೆ ಏನಾಯಿತು ಎಂದು ನನಗೆ ಗೊತ್ತಾಗಿರುವುದಿಲ್ಲ. ನಾನು ನೇರವಾಗಿ ಜಮೀನಿಗೆ ಹೋಗಿರುತ್ತೇನೆ. ಈ ಬಗ್ಗೆ ನಾನು ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆ.

(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಮಾನ್ಯ ಸ.ಸ.ಅ ಕೋರಲಾಗಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)

**ಪಾಟೀಸವಾಲುಃ ಸ.ಸ.ಅ ರವರಿಂದಃ**

**ಸಿ.ಡಬ್ಲೂ-3 / ಪಿ.ಡಬ್ಲೂ-2**

ದಿನಾಂಕ 15.02.2017 ರಂದು ಬೆಳಿಗ್ಗೆ 9.30 ಗಂಟೆ ಸಮಯದಲ್ಲಿ ನಾನು ಮತ್ತು ಚಾಸಾ-4 ರವರು ನಮ್ಮ ಬೀದಿಯಲ್ಲಿ ಮಾತನಾಡುತ್ತಾ ನಿಂತಿರುವಾಗ ಆರೋಪಿಗಳು ಚಾಸಾ-1 ರವರಿಗೆ ಸೇರಿದ ಖಾಲಿ ನಿವೇಶನದಲ್ಲಿ 1 ನೇ ಆರೋಪಿ ಪಾಯ ತೆಗೆಸುತ್ತಿದ್ದರು ಎಂದರೆ ಸರಿ. ಆಗ ಚಾಸಾ-1 ರವರು ಈ ಜಾಗ ತನಗೆ ಸೇರಿದ್ದು ಎಂದಾಗ 1 ನೇ ಆರೋಪಿ ನೀನ್ಯಾರು ಬೋಳಿಮಗಳೆ ಎಂದು ಬೈದಿದ್ದು, 2 ಮತ್ತು 3 ನೇ ಆರೋಪಿಗಳು ಸೂಳೆಮಗಳೆ ಎಂದು ಬೈದಿರುತ್ತಾರೆ ಎಂದರೆ ಸರಿಯಲ್ಲ. ಆ ಸಂದರ್ಭದಲ್ಲಿ 1 ನೇ ಆರೋಪಿ ಚಾಸಾ-1 ರವರನ್ನು ಹಿಡಿದು ಎಳೆದಾಡಿ ಕಾಲಿನಿಂದ ತುಳಿಯುವಾಗ ಚಾಸಾ-2 ರವರು ಗಲಾಟೆ ಬಿಡಿಸಲು ಬಂದಾಗ 4 ನೇ ಆರೋಪಿ ಚಾಸಾ-2 ರವರನ್ನು ತಬ್ಬಿ ಹಿಡಿದುಕೊಂಡಾಗ 5 ನೇ ಆರೋಪಿ ಕಲ್ಲಿನಿಂದ ಚಾಸಾ-2 ರವರ ಮೂಗಿಗೆ ರಕ್ತ ಬರುವಂತೆ ಹೊಡೆದಿರುತ್ತಾರೆ ಎಂದರೆ ಸರಿಯಲ್ಲ. ನಂತರ 4 ನೇ ಆರೋಪಿ ಕಲ್ಲಿನಿಂದ ಚಾಸಾ-2 ರವರ ಎದೆಗೆ ಹೊಡೆದು ನೋವುಂಟು ಮಾಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. 6 ರಿಂದ 8 ನೇ ಆರೋಪಿಗಳು ಈ ಜಾಗದ ವಿಚಾರಕ್ಕೆ ಮತ್ತೆ ಬಂದರೆ ಕೊಲೆ ಮಾಡದೆ ಬಿಡುವುದಿಲ್ಲವೆಂದು ಜೀವ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ಆಗ ನಾನು ಮತ್ತು ಚಾಸಾ-4 ಜಗಳ ಬಿಡಿಸಿ ಸಮಾಧಾನ ಮಾಡಿರುತ್ತೇವೆ ಎಂದರೆ ಸರಿಯಲ್ಲ. ಆಗ ಆರೋಪಿಗಳು ಕಲ್ಲುಗಳನ್ನು ಅಲ್ಲಿಯೇ ಬಿಸಾಕಿ ಹೋಗಿದ್ದು, ಅವುಗಳನ್ನು ಚಾಸಾ-1 ರವರು ಎತ್ತಿಟ್ಟುಕೊಂಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ನಂತರ ಚಾಸಾ-1 ಮತ್ತು 2 ರವರನ್ನು ಯಾವುದೋ ವಾಹನದಲ್ಲಿ ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ನಂತರ ಈ ವಿಚಾರವನ್ನು ಚಾಸಾ-1 ರವರು ಗ್ರಾಮದ ಯಜಮಾನರಿಗೆ ತಿಳಿಸಿದ್ದು, ಗ್ರಾಮದಲ್ಲಿ ಯಾವುದೇ ತೀರ್ಮಾನವಾಗದಿದ್ದ ಕಾರಣ ತಡವಾಗಿ ದೂರು ಮಾಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಈಗ ನನಗೆ ಓದಿ ಹೇಳಿದಂತೆ ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆಂದರೆ ಸರಿಯಲ್ಲ. ಸಾಕ್ಷಿಯು ಸದರಿ ಹೇಳಿಕೆಯನ್ನು

ಅಲ್ಲಗಳೆದಿದ್ದರಿಂದ ಕೆಂಪು ಶಾಹಿಯಿಂದ ಗುರುತಿಸಲಾದ ಸದರಿ ಹೇಳಿಕೆಯ ಭಾಗವನ್ನು **ನಿ.ಪಿ-3** ಎಂದು ಗುರುತಿಸಲಾಯಿತು. ಆರೋಪಿಗಳು ಹಾಗು ನಾನು ರಾಜಿ ಮಾಡಿಕೊಂಡಿರುತ್ತೇವೆ ಎಂದರೆ ಸರಿ. ಆ ಕಾರಣದಿಂದ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**<u>ಪಾಟೀಸವಾಲುಃ ಆರೋಪಿಗಳ ಪರ ಶ್ರೀ ಕೆ.ಎಸ್.ಕೆ, ವಕೀಲರಿಂದಃ</u>**

ನನ್ನ ಹೆಂಡತಿ ಗ್ರಾಮ ಪಂಚಾಯಿತಿ ಸದಸ್ಯರಾಗಿದ್ದರು ಎಂದರೆ ಸರಿ. ಕೆಂಪಮ್ಮರವರು ಬಹಿಷ್ಕಾರದ ವಿಚಾರವಾಗಿ ಈ ಹಿಂದೆ ದೂರು ನೀಡಿರುವ ಬಗ್ಗೆ ನನಗೆ ಗೊತ್ತಿಲ್ಲ. ನಾನು ಗಲಾಟೆ ನಡೆಯಿತು ಎಂದು ಹೇಳಿದ ಸ್ಥಳಕ್ಕೆ ಹೋಗಿಲ್ಲ, ಆದರೆ ರಸ್ತೆಯಲ್ಲಿ ನಿಂತು ಗಲಾಟೆ ಮಾಡಿಕೊಳ್ಳಬೇಡಿ ಎಂದು ಹೇಳಿ ಜಮೀನಿನ ಬಳಿ ಹೋಗಿರುತ್ತೇನೆ. ಯಾರು ಚಾಸಾ-1 ಮತ್ತು 2 ರವರಿಗೆ ಅವಾಚ್ಯ ಶಬ್ದಗಳಿಂದ ಬೈದು, ಹಲ್ಲೆ ಮಾಡಿರುತ್ತಾರೆಂದು ನನಗೆ ಗೊತ್ತಿಲ್ಲ.

**<u>ಮರುವಿಚಾರಣೆಃ</u>** ಇರುವುದಿಲ್ಲ.

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸಾ ಸ ಇ ಒ.,**

ಸಹಿ/-

**ಪ್ರಧಾನ ದಿವಾನಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.,**
**ನಂಜನಗೂಡು.**